ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 28/1/2020

ಸಂ.ಕ 28/1/20

# ಮೇಲ್ಮನೆಗೆ ಫೆ. 17ಕ್ಕೆ ಉಪ ಚುನಾವಣೆ

ಬೆಂಗಳೂರು: ಶಾಸಕ ರಿಜ್ವಾನ್ ಅರ್ಷದ್ ಅವರಿಂದ ತೆರವಾದ ವಿಧಾನ ಪರಿಷತ್‌ನ ಒಂದು ಸ್ಥಾನಕ್ಕೆ ಫೆಬ್ರವರಿ 17ರಂದು ಉಪ ಚುನಾವಣೆ ನಡೆಯಲಿದ್ದು, ಇದರಿಂದ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹಾದಿ ಸುಗಮವಾದಂತಾಗಿದೆ.

ಉಪಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದ್ದು, ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲು ಫೆಬ್ರವರಿ 6 ಕೊನೆಯ ದಿನವಾಗಿದ್ದು, ಫೆ.7ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ. ಫೆ. 10ರಂದು ಅಭ್ಯರ್ಥಿಗಳು ನಾಮಪತ್ರ ವಾಪಾಸ್ ಪಡೆಯಲು ಕೊನೆಯ ದಿನವಾಗಿದ್ದು, ಫೆ. 17 ರಂದು ಬೆಳಗ್ಗೆ 9ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದ್ದು ಅದೇ ದಿನ ಸಂಜೆ 5 ಗಂಟೆಗೆ ಮತಎಣಿಕೆ ನಡೆಯಲಿದೆ. ಯಾವುದೇ ಸದನದ ಸದಸ್ಯರಲ್ಲದೆ ಇದ್ದರೂ ಉಪ ಮುಖ್ಯಮಂತ್ರಿಯಾಗಿರುವ ಲಕ್ಷ್ಮಣ ಸವದಿ ಅವರು ಫೆಬ್ರವರಿ 22ರೊಳಗೆ ಯಾವುದಾದರೂ ಸದನದ ಸದಸ್ಯರಾಗಬೇಕಾಗಿತ್ತು. ಈಗ ಚುನಾವಣಾ ಆಯೋಗ ಉಪ ಚುನಾವಣೆ ವೇಳಾ ಪಟ್ಟಿ ಪ್ರಕಟಿಸಿರುವುದರಿಂದ ಸವದಿ ಅವರು ಈ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗುವ ಸಾಧ್ಯತೆಗಳು ನಿಚ್ಚಳವಾಗಿದೆ.